# ಕರ್ನಾಟಕ ವಿಧಾನ ಪರಿಷತ್ತು

1. ಚುಕ್ಕೆಗುರುತಿಲ್ಲದ ಪ್ರಶ್ನೆ ಸಂಖ್ಯೆ : 2635
2. ಸದಸ್ಯರ ಹೆಸರು : ಶ್ರೀ ಮಂಜುನಾಥ್ ಭಂಡಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)
3. ಉತ್ತರಿಸಬೇಕಾದ ದಿನಾಂಕ : 25.03.2022
4. ಉತ್ತರಿಸುವವರು : ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು

| ಕ್ರಮ ಸಂಖ್ಯೆ | ಪ್ರಶ್ನೆ | ಉತ್ತರ |
|---|---|---|
| (ಅ) | ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯಲ್ಲಿ ಅನ್ಯ ಇಲಾಖೆಯ ಗ್ರಾಮೀಣಾಭಿವೃದ್ಧಿಯ ಯಾವುದೇ ಅನುಭವವಿಲ್ಲದ ಅಧಿಕಾರಿಗಳು ನಿಯೋಜನೆ ಮೇಲೆ ಕರ್ತವ್ಯ ನಿರ್ವಹಿಸುತ್ತಿದ್ದು, ಇದರಿಂದ ಯೋಜನೆಗಳ ಅನುಷ್ಠಾನದಲ್ಲಿ ಹಿನ್ನಡೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯಲ್ಲಿ ಕಾರ್ಯನಿರ್ವಾಹಕ ಅಧಿಕಾರಿ ಹುದ್ದೆಗಳು ಖಾಲಿಯಿರುವುದರಿಂದ ಅನ್ಯ ಇಲಾಖೆಯ ಅಧಿಕಾರಿಗಳು ನಿಯೋಜನೆ ಮೇಲೆ ಕರ್ತವ್ಯ ನಿರ್ವಹಿಸುತ್ತಿದ್ದು, ಅವರುಗಳು ಇಲಾಖಾ ಯೋಜನೆಗಳನ್ನು ಸಮರ್ಥವಾಗಿ ಅನುಷ್ಠಾನಗೊಳಿಸುತ್ತಿದ್ದು, ಯೋಜನೆಗಳ ಅನುಷ್ಠಾನದಲ್ಲಿ ಯಾವುದೇ ಹಿನ್ನಡೆಯಾಗಿರುವುದಿಲ್ಲ. |
| (ಆ) | ಅನ್ಯ ಇಲಾಖೆಯ ಸಿಬ್ಬಂದಿಯ ನಿಯೋಜನೆಯನ್ನು ಅವರ ಮಾತೃ ಇಲಾಖೆಗೆ ಹಿಂದಿರುಗಿಸಿ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಸಿಬ್ಬಂದಿಗಳನ್ನು ನೇಮಿಸಲು ಸರ್ಕಾರ ಕೈಗೊಂಡ ಕ್ರಮವೇನು? | ನಿಯೋಜನೆ ಮೇಲೆ ಕರ್ತವ್ಯ ನಿರ್ವಹಿಸುತ್ತಿದ್ದ ಪಶುಪಾಲನಾ ಮತ್ತು ಪಶುವೈದ್ಯಕೀಯ ಸೇವಾ ಇಲಾಖೆಯ ಅಧಿಕಾರಿಗಳ ಸೇವೆಯನ್ನು ಈಗಾಗಲೇ ಅವರುಗಳ ಮಾತೃ ಇಲಾಖೆಗೆ ಹಿಂದಿರುಗಿಸಲಾಗಿದೆ. ಇಲಾಖೆಯಲ್ಲಿ ಖಾಲಿ ಇರುವ ಹುದ್ದೆಗಳನ್ನು ಅರ್ಹ ಅಧಿಕಾರಿಗಳಿಗೆ ಮುಂಬಡ್ತಿ ನೀಡುವ ಮೂಲಕ ಭರ್ತಿ ಮಾಡಿಕೊಳ್ಳಲಾಗುತ್ತಿದೆ.<br><br>ಕರ್ನಾಟಕ ಲೋಕಸೇವಾ ಆಯೋಗದ ಮೂಲಕ ನೇರ ನೇಮಕಾತಿ ಕೋಟಾದಡಿ ಕಾರ್ಯನಿರ್ವಾಹಕ ಅಧಿಕಾರಿ / ಸಹಾಯಕ ಕಾರ್ಯದರ್ಶಿ ಹುದ್ದೆಗೆ ಆಯ್ಕೆಯಾಗಿರುವ 2011ನೇ ಸಾಲಿನ ಒಟ್ಟು 60 ಅಭ್ಯರ್ಥಿಗಳಿಗೆ ನೇಮಕಾತಿ ಆದೇಶ ನೀಡುವ ಪ್ರಕ್ರಿಯೆ ಪರಿಶೀಲನೆಯಲ್ಲಿರುತ್ತದೆ. ಇಲಾಖೆಯಲ್ಲಿನ ಖಾಲಿ ಹುದ್ದೆಗಳು ಭರ್ತಿಯಾದಂತೆ ಸಂದರ್ಭಾನುಸಾರ ಇತರೆ ಇಲಾಖೆಗಳ ಅಧಿಕಾರಿಗಳ ಸೇವೆಯನ್ನು ಅವರ ಮಾತೃ ಇಲಾಖೆಗೆ ಹಿಂದಿರುಗಿಸಲು ಕ್ರಮವಹಿಸಲಾಗುವುದು. |

ಸಂಖ್ಯೆ: ಗ್ರಾಅಪ 11 ಪಬವ 2022

(ಕೆ.ಎಸ್. ಈಶ್ವರಪ್ಪ)
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು